# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 14 (60) |
| ಸದಸ್ಯರ ಹೆಸರು | | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | | 15-07-2024 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು, ಈ ಅತಿಥಿ ಉಪನ್ಯಾಸಕರಿಗೆ ಸರ್ಕಾರದಿಂದ ಯಾವ ರೀತಿಯ ವೇತನವನ್ನು ನೀಡಲಾಗುತ್ತಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2023-24ನೇ ಸಾಲಿನಲ್ಲಿ ಒಟ್ಟು 10936 ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಸರ್ಕಾರಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 36 ಡಿಸಿಇ 2024(ಇ) (ಭಾಗ-1), ದಿನಾಂಕ:04.03.2024 ಹಾಗೂ ತಿದ್ದುಪಡಿ ಆದೇಶ ದಿನಾಂಕ:16.03.2024 ರನ್ವಯ ಗೌರವಧನವನ್ನು ಪಾವತಿಸಲಾಗುತ್ತಿದೆ. ಪ್ರಸ್ತುತ ಪಾವತಿಸಿರುವ ಗೌರವಧನದ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಿದೆ. |
| ಆ) | ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಕಾರ್ಯಭಾರ ಎಷ್ಟು, ರಾಜ್ಯದ ಕೆಲವು ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಹೆಚ್ಚಿನ ಕೆಲಸದ ಒತ್ತಡ ಹೇರುತ್ತಿರುವುದರಿಂದ ಈ ಸಮಸ್ಯೆ ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಸಂಪೂರ್ಣವಾದ ಮಾಹಿತಿ ನೀಡುವುದು) | ಸರ್ಕಾರಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರನ್ವಯ ಕಲಾ, ವಾಣಿಜ್ಯ ವಿಷಯಗಳಿಗೆ ಗರಿಷ್ಠ 15 ಗಂಟೆ ಹಾಗೂ ವಿಜ್ಞಾನ ಹಾಗೂ ಪ್ರಯೋಗಾಲಯ ವಿಷಯಗಳಿಗೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿರುತ್ತದೆ. ಅದರಂತೆ, 15/19 ಗಂಟೆಗಳ ಕಾರ್ಯಭಾರಕ್ಕಿಂತ ಹೆಚ್ಚಿನ ಕಾರ್ಯಭಾರವನ್ನು ನಿಗದಿಪಡಿಸಿರುವುದಿಲ್ಲ. |

ಇಡಿ 171 ಡಿಸಿಇ 2024 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

## ಅನುಬಂಧ

ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024(ಇ) (ಭಾಗ-1), ದಿನಾಂಕ: 04.03.2024 ಹಾಗೂ ತಿದ್ದುಪಡಿ ಆದೇಶ ದಿನಾಂಕ: 16.03.2024ರಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಈ ಕೆಳಕಂಡಂತೆ ಗೌರವಧನವನ್ನು ಪರಿಷ್ಕರಿಸಿ ಆದೇಶಿಸಿದ್ದು, ಅದರಂತೆ ಗೌರವಧನವನ್ನು ಪಾವತಿಸಲಾಗುತ್ತಿದೆ.

| ಕ್ರ. ಸಂ | ಸೇವಾವಧಿ ಮತ್ತು ವಿದ್ಯಾರ್ಹತೆ | ಪ್ರಸ್ತುತ ಗೌರವಧನದ ಮೊತ್ತ | ಪರಿಷ್ಕರಿಸಿದ ಗೌರವಧನದ ಮೊತ್ತ | ಒಟ್ಟು ಗೌರವಧನದ ಮೊತ್ತ |
|---|---|---|---|---|
| 1 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 30,000/- | 5,000/- | 35,000/- |
| 2 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 26,000/- | 5,000/- | 31,000/- |
| 3 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32,000/- | 6,000/- | 38,000/- |
| 4 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28,000/- | 6,000/- | 34,000/- |
| 5 | 10 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32,000/- | 7,000/- | 39,000/- |
| 6 | 10 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28,000/- | 7,000/- | 35,000/- |
| 7 | 15 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32,000/- | 8,000/- | 40,000/- |
| 8 | 15 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28,000/- | 8,000/- | 36,000/- |